25

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ವರದಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 24|9|20

# ಬಾಕಿ ಪ್ರಕರಣಗಳ ಮಾಹಿತಿ ಕೇಳಿದ ಕೋರ್ಟ್

ಬೆಂಗಳೂರು: ಸಂಸದರು, ಶಾಸಕರು ಹಾಗೂ ವಿಧಾನಪರಿಷತ್ ಸದಸ್ಯರ ಮೇಲಿನ ಕ್ರಿಮಿನಲ್ ಪ್ರಕರಣಗಳ ವಿಚಾರಣೆಗೆ ಸ್ಥಾಪಿಸಲಾಗಿರುವ 'ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ' ವಿಚಾರಣೆಗೆ ಬಾಕಿ ಇರುವ ಪ್ರಕರಣಗಳ ಮಾಹಿತಿಯನ್ನು ಸಂಗ್ರಹಿಸಿ ನ್ಯಾಯಾಲಯಕ್ಕೆ ಸಲ್ಲಿಸುವಂತೆ ರಿಜಿಸ್ಟ್ರಾರ್ ಜನರಲ್‌ಗೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಸುಪ್ರೀಂ ಸ್ವಯಂಪ್ರೇರಿತವಾಗಿ ಹೈಕೋರ್ಟ್ ದಾಖಲಿಸಿಕೊಂಡಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾ. ಎ.ಎಸ್. ಓಕ್ ಹಾಗೂ ನ್ಯಾ. ಅಶೋಕ್ ಎಸ್. ಕಿಣಗಿ ಅವರಿದ್ದ ವಿಭಾಗೀಯ ಪೀಠ ಬುಧವಾರ ವಿಚಾರಣೆ ನಡೆಸಿತು. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಸ್ಥಾಪಿಸಿ ಹೊರಡಿಸಲಾದ ಆದೇಶದ ಪ್ರತಿ, ವಿಶೇಷ ನ್ಯಾಯಾಲಯದಲ್ಲಿ ಎಷ್ಟು ಪ್ರಕರಣಗಳು ಬಾಕಿ ಇವೆ ಮತ್ತು ಯಾವ್ಯಾವ ಹಂತಗಳಲ್ಲಿವೆ ಎಂಬ ಬಗ್ಗೆ ಜಿಲ್ಲಾವಾರು ವಿವರಗಳ ಜತೆಗೆ ಹೈಕೋರ್ಟ್ ತಡೆಯಾಜ್ಞೆ ನೀಡಿರುವ ಪ್ರಕರಣಗಳ ಆದೇಶ ಪ್ರತಿಗಳನ್ನು ಪಡೆದುಕೊಂಡು ಒಂದು ವಾರದಲ್ಲಿ ನ್ಯಾಯಾಲಯಕ್ಕೆ ಸಲ್ಲಿಸುವಂತೆ ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್ ಅವರಿಗೆ ನ್ಯಾಯಪೀಠ ನಿರ್ದೇಶನ ನೀಡಿತು. ಸಿಟಿ ಸಿವಿಲ್ ಕೋರ್ಟ್ ಆವರಣದಲ್ಲಿ ಸ್ಥಾಪಿಸುವ ಬಗ್ಗೆ ಮತ್ತು ಈ ವಿಚಾರದಲ್ಲಿ ಸರ್ಕಾರಕ್ಕೆ ನೆರವು ನೀಡಲು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡುವ ಕುರಿತು ಪ್ರತಿಕ್ರಿಯೆ ನೀಡಲು ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ಸೂಚಿಸಿತು.